ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು–560001.

ಸಂಖ್ಯೆ: ಕಾಶಿಇ/ಶೈವಿ/22/ಸುತ್ತೋಲೆ/2023–24
ದಿನಾಂಕ: 21.02.2024.

# ಸುತ್ತೋಲೆ

ವಿಷಯ: ಕರ್ನಾಟಕ ಸಂಭ್ರಮ – 50 "ಹೆಸರಾಯಿತು ಕರ್ನಾಟಕ – ಉಸಿರಾಗಲಿ ಕನ್ನಡ" ಅಭಿಯಾನದ ಕುರಿತು.

ಉಲ್ಲೇಖ: ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು, ರವರ ಪತ್ರ ಸಂಖ್ಯೆ:ಡಿಕೆಸಿ:104/3/2023 ದಿನಾಂಕ:03.02.2024.

* * * * * *

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಸಂಭ್ರಮ – 50 "ಹೆಸರಾಯಿತು ಕರ್ನಾಟಕ – ಉಸಿರಾಗಲಿ ಕನ್ನಡ" ಅಭಿಯಾನದ ಅಂಗವಾಗಿ ವರ್ಷ ಪೂರ್ತಿ ಆಚರಿಸುವ ಸಂಬಂಧ ಪದವಿ ಕಾಲೇಜುಗಳಲ್ಲಿ "ನನ್ನ ಭಾಷೆ ನನ್ನ ನಾಡು" ಶೀರ್ಷಿಕೆಯಡಿ ಪ್ರಬಂಧ, ಭಾಷಣ, ರಸಪ್ರಶ್ನೆ ಮುಂತಾದ ಕಾರ್ಯಕ್ರಮಗಳನ್ನು ಏರ್ಪಡಿಸಲು ಹಾಗೂ ವಿಜೇತ ಸ್ಪರ್ಧಿಗಳಿಗೆ ಪದವಿ ಕಾಲೇಜುಗಳಲ್ಲಿಯೇ ಲಾಂಛನ ಮಾದರಿಯ ಟ್ರೋಫಿಯನ್ನು ವಿತರಣೆ ಮಾಡುವಂತೆ ತೀರ್ಮಾನಿಸಲಾಗಿದ್ದು, ಅದರನ್ವಯ ಕಾಲೇಜುಗಳಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಉಲ್ಲೇಖಿತ ಪತ್ರದಲ್ಲಿ ತಿಳಿಸಲಾಗಿರುತ್ತದೆ.

ತತ್ಸಂಬಂಧವಾಗಿ, ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳಲ್ಲಿ "ನನ್ನ ಭಾಷೆ ನನ್ನ ನಾಡು" ಶೀರ್ಷಿಕೆಯಡಿ ಪ್ರಬಂಧ, ಭಾಷಣ, ರಸಪ್ರಶ್ನೆ ಮುಂತಾದ ಕಾರ್ಯಕ್ರಮಗಳನ್ನು ಏರ್ಪಡಿಸಲು ಹಾಗೂ ವಿಜೇತ ಸ್ಪರ್ಧಿಗಳಿಗೆ ಪ್ರಥಮ, ದ್ವಿತೀಯ ಹಾಗೂ ತೃತೀಯ ಬಹುಮಾನವಾಗಿ ಕಾಲೇಜುಗಳಿಂದಲೇ ಲಾಂಛನ ಮಾದರಿಯ ಟ್ರೋಫಿಯನ್ನು ವಿತರಣೆ ಮಾಡಲು ಸೂಚಿಸಲಾಗಿರುತ್ತದೆ.

ಮುಂದುವರೆದು ಸದರಿ ಸ್ಪರ್ಧೆಗಳಲ್ಲಿ ಪ್ರಥಮ ಬಹುಮಾನ ಪಡೆದ ಪ್ರತಿ ಜಿಲ್ಲೆಯ ವಿಜೇತ ಸ್ಪರ್ಧಿಗಳ ವಿವರಗಳನ್ನು ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು–560 002 ರವರಿಗೆ ಕಳುಹಿಸಿಕೊಡಲು ಸೂಚಿಸಲಾಗಿದೆ ಹಾಗೂ ಕಾರ್ಯಕ್ರಮದ ಕುರಿತು ಸಾಮಾಜಿಕ ಜಾಲತಾಣ ವಿಳಾಸ: www.kannadasiri.karnataka.gov.in ರಲ್ಲಿ ಅಪ್ಲೋಡ್ ಮಾಡಲು ತಿಳಿಸಲಾಗಿದೆ.

**ಹೆಚ್ಚಿನ ಮಾಹಿತಿಗಾಗಿ: ಶ್ರೀ ಸಂತೋಷ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು,**
**ದೂ.ಸಂ: 080 22213530 –ರವರನ್ನು ಸಂಪರ್ಕಿಸುವುದು.**

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

<u>ಇವರಿಗೆ : ಮಾಹಿತಿ ಹಾಗೂ ಅಗತ್ಯಕ್ರಮಕ್ಕಾಗಿ.</u>

1. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ – ತಮ್ಮ ವ್ಯಾಪ್ತಿಗೆ ಬರುವ ಖಾಸಗಿ ಅನುದಾನಿತ ಕಾಲೇಜುಗಳಿಗೆ ರವಾನಿಸಲು ಸೂಚಿಸಲಾಗಿದೆ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು– ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

<u>ಪ್ರತಿಯನ್ನು:</u>

1. ನಿರ್ದೇಶಕರ ಆಪ್ತಶಾಖೆ, ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು– 560 002.
2. ಆಯುಕ್ತರ, ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ, ಹೆಚ್ಚುವರಿ ನಿರ್ದೇಶಕರ ಹಾಗೂ ಜಂಟಿ ನಿರ್ದೇಶಕರುಗಳ ಆಪ್ತ ಶಾಖೆಗೆ, ಕೇಂದ್ರ ಕಛೇರಿ, ಬೆಂಗಳೂರು.
4. ಕಛೇರಿ ಪ್ರತಿ.